ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರುಣ ಶಹಾಪೂರ., ಇವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

## ವಿಷಯ

ವೃತ್ತಿ ಶಿಕ್ಷಣ ಇಲಾಖೆಯ ಸಿಬ್ಬಂದಿಗಳನ್ನು ದಿನಾಂಕ:06.04.2011ರ ವಿಶೇಷ ಕಾನೂನಿನ ಮೂಲಕ ವಿಲೀನಗೊಳಿಸಲಾಗಿದೆ. ಆದರೆ ಆ ಸಿಬ್ಬಂದಿಗಳು ಖಾಯಂ ಪೂರ್ವದಲ್ಲಿ 20, 25 ವರ್ಷಗಳಿಂದ ಸಲ್ಲಿಸಿದ ಸೇವೆಯನ್ನು ನಿಶ್ಚಿತ ಪಿಂಚಣಿಗೆ ಪರಿಗಣಿಸಿರುವುದಿಲ್ಲ ಈ ಸಮಸ್ಯೆಯನ್ನು ಪರಿಹರಿಸಿ ಖಾಯಂಪೂರ್ವ ಸೇವೆಯನ್ನು ನಿಶ್ಚಿತ ಪಿಂಚಣಿಗೆ ಪರಿಗಣಿಸುವಂತೆ ಹಾಗೂ ವೃತ್ತಿ ಶಿಕ್ಷಣ ಇಲಾಖೆಯಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿಲೀನಗೊಂಡು ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಬಿ.ಎಡ್ ವಿನಾಯಿತಿ ನೀಡುವ ಕುರಿತು ಹಾಗೂ ಪ್ರೊಬೇಷನರಿ ಅವಧಿ ಘೋಷಿಸುವಂತೆ ಕೋರಿರುತ್ತಾರೆ.

## ಉತ್ತರ

ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ ಸಂಖ್ಯೆ:ಸಂವ್ಯಶಾಇ 22 ಶಾಸನ 2011, ದಿನಾಂಕ:06.04.2011 ರಂದು ಜಾರಿಗೆ ಬಂದಿದ್ದು, ಈ ವಿಧೇಯಕದಲ್ಲಿ ವಿಧಿಸಿರುವ ಷರತ್ತುಗಳ ಆಧಾರದ ಮೇಲೆ ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಉಪನ್ಯಾಸಕರನ್ನು ವಿಲೀನ ವಿಧೇಯಕದನ್ವಯ ದಿನಾಂಕ:06.04.2011ಕ್ಕೆ ನಿರಂತರವಾಗಿ 05 ವರ್ಷಗಳ ಸೇವೆ ಸಲ್ಲಿಸಿರುವ ನೌಕರರುಗಳನ್ನು ವಿವಿಧ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದೆ. ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನು ಕರ್ತವ್ಯಕ್ಕೆ ಹಾಜರಾದ ನಂತರ, ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು, ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಟಕ್ಕೆ ನಿಗಧಿಗೊಳಿಸತಕ್ಕದ್ದು ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ, ಜೇಷ್ಠತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗದುಕೊಳ್ಳತಕ್ಕದಲ್ಲ ಎಂಬ ಷರತ್ತು ವಿಧಿಸಲಾಗಿದೆ. ಅಲ್ಲದೆ, ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ 2011ರ ನಿಯಮ-3ರಲ್ಲಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ಒಂದು ಸಲದ ಕ್ರಮವಾಗಿ ವಿಲೀನಗೊಳಿಸಲು ಪರಿಗಣಿಸಲಾಗಿದೆ.

ಮಾನ್ಯ ಸುಪ್ರೀಂಕೋರ್ಟ್ ನ್ಯಾಯಾಲಯದ ಅಪೀಲು (ಸಿವಿಲ್) 3595-3612/1999 ದಿನಾಂಕ:10.04.2006ರ ರಾಜ್ಯ ಸರ್ಕಾರ ಮತ್ತು ಇತರರು ವಿರುದ್ಧ ಉಮಾದೇವಿ ಮತ್ತು ಇತರರು ಪ್ರಕರಣದಲ್ಲಿ ಒಂದು ಬಾರಿ ಕ್ರಮವಾಗಿ ಕ್ರಮಬದ್ಧಗೊಳಿಸಲು ಅವಕಾಶ ನೀಡಿ ಆದೇಶಿಸಿದ್ದು, ಅಂತಹ ವಿಲೀನ/ಕ್ರಮಬದ್ಧಗೊಳಿಸುವಿಕೆಯ ನಿಯಮಗಳನ್ನು ಮತ್ತೊಮ್ಮೆ ಯಾವುದೇ ತಿದ್ದುಪಡಿ ಮಾಡಬಾರದೆಂದು ಸ್ಪಷ್ಟ ನಿರ್ದೇಶನ ನೀಡಿರುವುದರಿಂದ, ಸದರಿ ಅಧಿನಿಯಮಕ್ಕೆ ತಿದ್ದುಪಡಿ ತರುವುದು ಘನ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನಗಳಿಗೆ ವ್ಯತಿರಿಕ್ತವಾಗುತ್ತದೆ. ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ-2011ನ್ನು ಪುನಃ ತೆರೆಯಲು ಮತ್ತು ತಿದ್ದುಪಡಿ ಮಾಡಿ ಅವರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿ, ನಿಶ್ಚಿತ ಪಿಂಚಣಿ ನೀಡಲು ಹಾಗೂ ಅವರ ಹಿಂದಿನ ಅರ್ಹತೆಯನ್ನು ಪರಿಗಣಿಸಲು ಅವಕಾಶವಿರುವುದಿಲ್ಲ.

ಕರ್ನಾಟಕ ಸಾಮಾನ್ಯ ಸೇವೆಗಳು (ಪದವಿ ಪೂರ್ವ ಶಿಕ್ಷಣ) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 145 ಡಿಜಿಓ 2007, ದಿನಾಂಕ:04.02.2008ರಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರಿಗೆ ಸ್ನಾತಕೋತ್ತರ ಪದವಿಯಲ್ಲಿ ದ್ವಿತೀಯ ದರ್ಜೆಯಲ್ಲಿ ತೇರ್ಗಡೆ ಹೊಂದಬೇಕು ಹಾಗೂ ಅವರ ಸ್ವಂತ ಖರ್ಚಿನಲ್ಲಿ 04 ವರ್ಷದೊಳಗಾಗಿ ಬಿ.ಇಡಿ ಪದವಿಯನ್ನು ತೇರ್ಗಡೆ ಹೊಂದಬೇಕು ಎಂಬ ನಿಯಮಾವಳಿಗಳನ್ನು ರೂಪಿಸಲಾಗಿದೆ. ವೃಂದ ಮತ್ತು ನೇಮಕಾತಿ, ವಿಲೀನ ವಿಧೇಯಕ ಮತ್ತು ಎನ್.ಸಿ.ಟಿ.ಇ ನಿಯಮಗಳಂತೆ, ಉಪನ್ಯಾಸಕರುಗಳು ಬಿ.ಇಡಿ ಪದವಿ ಪಡೆಯುವುದು ಕಡ್ಡಾಯವಾಗಿರುತ್ತದೆ.

ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ, 2011ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 22 ಶಾಸನ 2011, ದಿನಾಂಕ:06.04.2011 ರನ್ವಯ ಸರ್ಕಾರದ ಆದೇಶ ಸಂಖ್ಯೆ: ಇಡಿ 93 ಟಿವಿಇ 2012, ದಿನಾಂಕ:27.12.2012ರಲ್ಲಿ ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಅರೆಕಾಲಿಕ ಉಪನ್ಯಾಸಕರುಗಳಾಗಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರುಗಳ ಹುದ್ದೆಗೆ ವಿಲೀನಗೊಳಿಸಲು ಆದೇಶಿಸಿದೆ. ಸದರಿ ಆದೇಶದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಬಿ.ಇಡಿ ಪದವಿಯನ್ನು ತಮ್ಮ ಸ್ವಂತ ಖರ್ಚಿನಲ್ಲಿ ನಿಗಧಿತ ಅವಧಿಯಲ್ಲಿ ಪಡೆಯತಕ್ಕದ್ದು. ನಿಗಧಿತ ಅವಧಿಯಲ್ಲಿ ಬಿ.ಇಡಿ ಪದವಿಯನ್ನು ಹೊಂದದೆ ಇದ್ದಲ್ಲಿ, ಸೇವೆಯಿಂದ ವಿಮುಕ್ತಿಗೊಳಿಸಲಾಗುವುದೆಂದು ತಿಳಿಸಲಾಗಿದೆ. ನಂತರ, ಸುತ್ತೋಲೆ ಸಂಖ್ಯೆ: ಇಡಿ 78 ಟಿವಿಇ 2014, ದಿನಾಂಕ:18.07.2017ರಲ್ಲಿ ವಿಲೀನ ವಿಧೇಯಕದನ್ವಯ ಕೆ.ಸಿ.ಎಸ್. (ಪರಿವೀಕ್ಷಣಾ) ನಿಯಮಗಳು 1977 ವಿಲೀನಗೊಂಡ ನೌಕರರಿಗೂ ಅನ್ವಯವಾಗುತ್ತದೆ ಎಂದು ತಿಳಿಸುತ್ತಾ, 04 ವರ್ಷದೊಳಗಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಬಿ.ಇಡಿ ಪದವಿ ಹೊಂದಬೇಕು ಎಂಬ ಷರತ್ತನ್ನು ವಿಧಿಸಲಾಗಿ.

ಸದರಿ ಷರತ್ತನ್ನು ಪೂರೈಸದಿದ್ದಲ್ಲಿ ಸೇವೆಯಿಂದ ವಿಮುಕ್ತಿಗೊಳಿಸಲು ನಿಯಮಾನುಸಾರ ಕ್ರಮಕೈಗೊಳ್ಳುವುದಾಗಿ ಸೂಚಿಸಲಾಗಿದೆ.

ಕೇಂದ್ರ ಸರ್ಕಾರದ ನಿಯಮಗಳಾದ National Council for Teacher Education (Recognition, norms and procedure) Regulations-2014 ರ ಅಪೆಂಡಿಕ್ಸ್-14ರನ್ವಯ ತರಗತಿ 06 ರಿಂದ 08, 09 ರಿಂದ 10 ಹಾಗೂ 11 ರಿಂದ 12ರವರೆಗೆ ಉಪನ್ಯಾಸ ನೀಡಲು ಬಿ.ಇಡಿ ಪದವಿ ಹೊಂದಿರಬೇಕೆಂದು ಉಪಬಂಧ ಕಲ್ಪಿಸಲಾಗಿದೆ. ಬಿ.ಇಡಿ ಪದವಿ ಹೊಂದುವ ಷರತ್ತಿನಿಂದ ವಿನಾಯಿತಿ ನೀಡುವ ಪ್ರಸ್ತಾವನೆಯು ಸದರಿ ನಿಯಮಗಳ ಉಪಬಂಧಗಳಿಗೆ ವ್ಯತಿರಿಕ್ತವಾಗುತ್ತವೆ. NCTE ನಿಯಮಗಳನ್ವಯ ಮತ್ತು Right to Education Act ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ, ವಿಲೀನ ವಿಧೇಯಕದನ್ವಯ ಬಿ.ಇಡಿ ಪದವಿ ಹೊಂದುವ ಷರತ್ತಿನಿಂದ ವಿನಾಯಿತಿ ನೀಡಲು ಅವಕಾಶವಿಲ್ಲ ಹಾಗೂ ಬಿ.ಇಡಿ ವಿದ್ಯಾರ್ಹತೆಯನ್ನು ನಿಗಧಿಪಡಿಸುವುದು ರಾಜ್ಯ ಸರ್ಕಾರದ ನಿಯಮಗಳಡಿ ಬರುವುದಿಲ್ಲ. ಬಿ.ಇಡಿ ವಿದ್ಯಾರ್ಹತೆಯನ್ನು ನಿಗಧಿಪಡಿಸುವುದು ಕೇಂದ್ರದ ನಿಯಮಗಳಡಿ ಬರುತ್ತದೆ. ಆದಾಗ್ಯೂ, ಬಿ.ಇಡಿ ವಿದ್ಯಾರ್ಹತೆಯನ್ನು ಹೊಂದುವ ಷರತ್ತಿಯಿಂದ ವಿನಾಯಿತಿ ನೀಡಿದರೆ, ಇದು ಕೇಂದ್ರದ ನಿಯಮಗಳಿಗೆ ವ್ಯತಿರಿಕ್ತವಾಗುತ್ತದೆ. ಈ ಹಿನ್ನೆಲೆಯಲ್ಲಿ, National Council for Teacher Education (Recognition, norms and procedure) Regulations-2014ರ ನಿಯಮಗಳನ್ನು ಪಾಲಿಸುವುದು ರಾಜ್ಯ ಸರ್ಕಾರದ ಕಡ್ಡಾಯವಾಗಿರುತ್ತದೆ. ಆದ್ದರಿಂದ, ಬಿ.ಇಡಿ ಪದವಿಯನ್ನು ಕಡ್ಡಾಯಗೊಳಿಸಿರುವುದನ್ನು ತೆರವುಗೊಳಿಸುವುದಕ್ಕೆ ಅವಕಾಶವಿರುವುದಿಲ್ಲ.

ಆದ್ದರಿಂದ, ವಿಲೀನ ವಿಧೇಯಕ ತಿದ್ದುಪಡಿ ಮಾಡಲು ಹಾಗೂ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿ ನಿಶ್ಚಿತ ಪಿಂಚಣಿ ನೀಡಲು ಹಾಗೂ ಬಿ.ಇಡಿ ಪದವಿ ಪಡೆಯುವುದರಿಂದ ವಿನಾಯಿತಿ ನೀಡಲು ಅವಕಾಶವಿರುವುದಿಲ್ಲ.

ವಿಲೀನಗೊಂಡ ಅರೆಕಾಲಿಕ ಉಪನ್ಯಾಸಕರುಗಳ ಪೈಕಿ ಇದುವರೆವಿಗೂ ಬಿ.ಇಡಿ ಪದವಿ ಪಡೆಯದೆ ಇರುವವರ ಪರಿವೀಕ್ಷಣಾವಧಿಯನ್ನು ಘೋಷಣೆ ಮಾಡಲು ಸಾಧ್ಯವಾಗಿರುವುದಿಲ್ಲ. ಬಿ.ಇಡಿ ಪದವಿ ಹೊಂದಿರುವವರಿಗೆ ಮಾತ್ರ ಪರಿವೀಕ್ಷಣಾ ಅವಧಿ ಘೋಷಣೆ ಮಾಡಲಾಗುವುದು.

**ಸಂಖ್ಯೆ:ಇಪಿ 08 ಟಿವಿಇ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು